ದೂರವಾಣಿ ಸಂಖ್ಯೆ: 2419209/2419361
ಫ್ಯಾಕ್ಸ್: 0821-2419363/2419301

e-mail : registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ : 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು-570005

ಸಂಖ್ಯೆ: ಜಿಎಲ್6/313/2022-23

ದಿನಾಂಕ: 25.09.2023

## ಸುತ್ತೋಲೆ

ವಿಷಯ: ಕರ್ನಾಟಕ ವಿಧಾನಮಂಡಲ ಗ್ರಂಥಾಲಯದ ಸೌಲಭ್ಯವನ್ನು ಮೈಸೂರು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರುಗಳು, ಸಂಶೋಧನಾ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳುವ ಬಗ್ಗೆ.

ಉಲ್ಲೇಖ: ಎಂ.ಕೆ ವಿಶಾಲಾಕ್ಷಿ, ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ ಸಚಿವಾಲಯ, ಕೊಠಡಿ ಸಂಖ್ಯೆ: 121, ಅಂಚೆ ಪೆಟ್ಟಿಗೆ ಸಂಖ್ಯೆ:5074, ಮೊದಲನೇ ಮಹಡಿ, ವಿಧಾನ ಸೌಧ, ಬೆಂಗಳೂರು ಇವರ ಪತ್ರ ಸಂಖ್ಯೆ: ಕವಿಸಸ/ಗ್ರಂಶಾ/158/ಗ್ರಂ.ಸ.ಟಿ/2023-24 ದಿನಾಂಕ: 12.09.2023.

****

ಕರ್ನಾಟಕ ವಿಧಾನಮಂಡಲ ಗ್ರಂಥಾಲಯದಲ್ಲಿ ಭಾರತ ಸಂವಿಧಾನ ರಚನಾ ಸಭೆಯ ನಡಾವಳಿಗಳು, ಕರ್ನಾಟಕ ವಿಧಾನಮಂಡಲದ ನಡಾವಳಿಗಳು, ಲೋಕಸಭೆ ಮತ್ತು ರಾಜ್ಯಸಭೆಯ ನಡಾವಳಿಗಳು, House of Lords/ House of Commons ಸಂಪುಟಗಳು, ಜನಗಣತಿಯ ವರದಿಗಳು, ರಾಜ್ಯ ಮತ್ತು ಕೇಂದ್ರ ಸರ್ಕಾರದ ಗೆಜೆಟ್‌ಗಳು, ಸಮಿತಿಗಳ ಹಾಗೂ ಆಯೋಗಗಳ ವರದಿಗಳು, ಡಾ. ಬಾಬಾ ಸಾಹೇಬ್ ಅಂಬೇಡ್ಕರ್‌ರವರ ಬರವಣಿಗೆಗಳು, ಭಾರತದ ಮಹಾಪುರುಷರ ಆತ್ಮಚರಿತ್ರೆಗಳು ಇನ್ನೂ ಹಲವಾರು ಸಂಗ್ರಹಗಳು ವಿಧಾನಮಂಡಲ ಗ್ರಂಥಾಲಯ, ಕೊಠಡಿ ಸಂಖ್ಯೆ: 28, ನೆಲ ಮಹಡಿ, ವಿಧಾನಸೌಧ ಇಲ್ಲಿ ಪರಾಮರ್ಶೆಗೆ ಲಭ್ಯವಿದ್ದು, ಇದಲ್ಲದೇ, ವಿಧಾನಮಂಡಲ ಉಭಯ ಸದನಗಳ ನಡಾವಳಿ ಪುಸ್ತಕಗಳನ್ನು ಡಿಜಿಟಲೀಕರಣ ಮಾಡಲಾಗಿದ್ದು, ಅದನ್ನು ವಿಧಾನಮಂಡಲದ ವೆಬ್‌ಸೈಟ್ www.kla.kar.nic.in ನಲ್ಲಿ ಪಡೆಯಬಹುದಾಗಿರುತ್ತದೆ ಎಂದು ಉಲ್ಲೇಖಿತ ಪತ್ರದಲ್ಲಿ ತಿಳಿಸಿರುತ್ತಾರೆ. ಆದ್ದರಿಂದ ಸದರಿ ಗ್ರಂಥಾಲಯದ ಸೌಲಭ್ಯವನ್ನು ಮೈಸೂರು ವಿಶ್ವವಿದ್ಯಾನಿಲಯದ ಪ್ರಾಧ್ಯಾಪಕರುಗಳು ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಲಾಗಿದೆ.

ಕುಲಸಚಿವ

ಇವರಿಗೆ,

1. ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರು/ನಿರ್ದೇಶಕರುಗಳು, ಘಟಕ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವ(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
4. ಗ್ರಂಥಪಾಲಕರು, ಮೈಸೂರು ವಿಶ್ವವಿದ್ಯಾನಿಲಯ ಗ್ರಂಥಾಲಯ, ಮಾನಸಗಂಗೋತ್ರಿ, ಮೈಸೂರು- ಇವರಿಗೆ **ಗ್ರಂಥಾಲಯದ ಸೂಚನಾ ಫಲಕದಲ್ಲಿ ಅಳವಡಿಸುವುದು ಹಾಗೂ ಗ್ರಂಥಾಲಯಕ್ಕೆ ಬರುವ ಪ್ರಾಧ್ಯಾಪಕರು/ಸಂಶೋಧನಾ ವಿದ್ಯಾರ್ಥಿಗಳ ಗಮನಕ್ಕೆ ತರುವುದು.**
5. ನಿರ್ದೇಶಕರು, ಐ.ಸಿ.ಡಿ., ಗಣಕ ವಿಜ್ಞಾನ ಅಧ್ಯಯನ ವಿಭಾಗದ ಕಟ್ಟಡ, ಮಾನಸಗಂಗೋತ್ರಿ, ಮೈಸೂರು- **ಸದರಿ ಸುತ್ತೋಲೆಯನ್ನು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ತಿಳಿಸಿದೆ.**
6. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಮಾ.ಗಂ., ಮೈಸೂರು-**ಸದರಿ ಸುತ್ತೋಲೆಯನ್ನು ವಿದ್ಯಾರ್ಥಿನಿಲಯಗಳ ಸೂಚನಾ ಫಲಕದಲ್ಲಿ ಪ್ರಚುರ ಪಡಿಸಲು ತಿಳಿಸಿದೆ.**
7. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು
8. ಕುಲಪತಿ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತ ಸಹಾಯಕರು, ಮೈ.ವಿ.ವಿ., ಮೈಸೂರು
9. ಕಚೇರಿ ಪ್ರತಿ [illegible]